# ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (16) 129
02. ಸದಸ್ಯರ ಹೆಸರು : ಶ್ರೀ ಎನ್.ಎಸ್. ಬೋಸರಾಜ್
03. ಉತ್ತರಿಸಬೇಕಾದ ದಿನಾಂಕ : 02-03-2020.
04. ಉತ್ತರಿಸಬೇಕಾದ ಸಚಿವರು : ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ). | ರಾಯಚೂರಿನಲ್ಲಿರುವ ರಿಮ್ಸ್ ಮೆಡಿಕಲ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? ಆಸ್ಪತ್ರೆಯಲ್ಲಿ ಪ್ರಸ್ತುತ ಇರುವ ಹಾಸಿಗೆಗಳ ಸಂಖ್ಯೆ ಎಷ್ಟು ? | ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ 590 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಇದಕ್ಕೆ ಹೊಂದಿಕೊಂಡಿರುವ ಬೋಧಕ ಆಸ್ಪತ್ರೆಯು 650 ಹಾಸಿಗೆಗಳ ಸಾಮರ್ಥ್ಯವನ್ನು ಹೊಂದಿರುತ್ತದೆ. |
| (ಆ). | ಸದರಿ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು ? | ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಒಟ್ಟು 18 ವೈದ್ಯರ ಹುದ್ದೆಗಳು ಖಾಲಿ ಇರುತ್ತವೆ |
| (ಇ). | ರಾಯಚೂರಿನಲ್ಲಿರುವ ರಾಜೀವ್‌ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಪ್ರಾಂಗಣದಲ್ಲಿ ಸ್ವಚ್ಛತೆ ಕಾಪಾಡಲು ಹಾಗೂ ಪ್ರಾಂಗಣದಲ್ಲಿ ದೀಪಗಳನ್ನು ಅಳವಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? | ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಸ್ವಚ್ಛತೆಯನ್ನು ಕಾಪಾಡಲು ಹೊರಗುತ್ತಿಗೆ ಆಧಾರದಲ್ಲಿ ಸ್ವಚ್ಛತಾ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿರುತ್ತದೆ ಹಾಗೂ ಆಸ್ಪತ್ರೆ ಆವರಣದಲ್ಲಿ ಬೀದಿ ದೀಪಗಳನ್ನು ಅಳವಡಿಸುವ ಸಂಬಂಧ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |

ಸಂಖ್ಯೆ: ಎಂಇಡಿ 19 ಎಂಎಂಇ 2020

(ಡಾ|| ಕೆ.ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು